1

DIR-273/2021

28/10/2021

| |
|---|
| ಉ.ನಿ(ಆ) |
| ಉ.ನಿ(ಮೌ/ಅ) |
| ಉ.ನಿ(ಶೈ) |
| ಜಂನಿ(ಪ) |
| ಸ.ನಿ(ಮೂಪೌ) |
| ಸನಿ(ಗಶಾ) |
| ಸನಿ(ಇ-ಆ) |
| ರಾ.ಸಂ(ರಾಸೇಯೋ) |
| ಸ.ನಿ(ಕ್ರೀಶಾ) |
| ಸ.ನಿ (ಲೆಶಾ) |
| ಲೆ.ಅ. (ಆಶಾ) |
| ಸ.ನಿ(ಎಂ.ಹೆಚ್.ಆರ್.ಡಿ) |

28/10

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ:- 2021-22ನೇ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರುಗಳ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳುವ ಬಗ್ಗೆ.

ಓದಲಾಗಿದೆ:- 1) ಸರ್ಕಾರದ ಆದೇಶ ಸಂಖ್ಯೆ:ಇಡಿ 72 ಎಸ್‌ಟಿಬಿ 2016 ದಿನಾಂಕ:04-07-2016.

2) ಸರ್ಕಾರದ ಆದೇಶ ಸಂಖ್ಯೆ: ಇಪಿ 62 ಡಿಜಿಡಿ 2019 ದಿನಾಂಕ:19-03-2021.

3) ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆರವರ ಏಕ ಕಡತ ಸಂಖ್ಯೆ:ಪಪೂಶಿಇ/ಆ.ವಿ.-ಎ/ವಿ.ನಿ.-5/ಅ.ಉ.ಸೇ./2021-22.

* * *

ಪ್ರಸ್ತಾವನೆ:-

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರುಗಳನ್ನು ನೇಮಕಾತಿ ಮಾಡಿಕೊಳ್ಳಲು ಮಾರ್ಗಸೂಚಿಗಳನ್ನು ನಿಗದಿಪಡಿಸಲಾಗಿದೆ.

ಮೇಲೆ (2)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಸರ್ಕಾರದ ಆದೇಶ ಸಂಖ್ಯೆ:ಇಡಿ 72 ಎಸ್‌ಟಿಬಿ 2016 ದಿನಾಂಕ:04-07-2016ರಲ್ಲಿನ ಷರತ್ತುಗಳಿಗೊಳಪಟ್ಟು ಮತ್ತು 2020-21ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ 2202-02-109-0-13-034ರಡಿ ಅತಿಥಿ ಉಪನ್ಯಾಸಕರ ಗೌರವಧನ ಪಾವತಿಗಾಗಿ ಒದಗಿಸಲಾಗಿರುವ ಅನುದಾನದಿಂದ ಭರಿಸುವ ಷರತ್ತಿಗೊಳಪಟ್ಟು 2020-21ನೇ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿವಿಧ ಕಾರಣಗಳಿಂದ ತೆರವಾದ ಒಟ್ಟು 2832 ಉಪನ್ಯಾಸಕರ ಹುದ್ದೆಗಳಿಗೆದುರಾಗಿ ಒಟ್ಟು 1835 ಅತಿಥಿ ಉಪನ್ಯಾಸಕರುಗಳನ್ನು, ಫೆಬ್ರವರಿ 2021ರ ಮಾಹೆಯಿಂದ ಮಾಸಿಕ ರೂ.9,000/-ಗಳ ಗೌರವಧನದ ಆಧಾರದಲ್ಲಿ ನೇಮಕಾತಿ ಮಾಡಿಕೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿತ್ತು.

2021-22ನೇ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದಲ್ಲಿ 10ನೇ ತರಗತಿಯ 8 ರಿಂದ 9 ಲಕ್ಷ ವಿದ್ಯಾರ್ಥಿಗಳು ಉತ್ತೀರ್ಣರಾಗಿರುವುದರಿಂದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಹೆಚ್ಚಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಗುಣಮಟ್ಟದ ಶಿಕ್ಷಣವನ್ನು ನೀಡುವುದಕ್ಕಾಗಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಂಡು ಶೈಕ್ಷಣಿಕ ಚಟುವಟಿಕೆಯನ್ನು ನಡೆಸಬೇಕಾಗಿರುವುದರಿಂದ 2021-22ನೇ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 3552 ಅತಿಥಿ ಉಪನ್ಯಾಸಕರುಗಳ ಅವಶ್ಯಕತೆ ಇರುತ್ತದೆ. ಸದರಿ ಅತಿಥಿ ಉಪನ್ಯಾಸಕರುಗಳಿಗೆ ಇಲ್ಲಿಯವರೆಗೆ ಹಿಂದಿನ ವರ್ಷಗಳಲ್ಲಿ 10 ಗಂಟೆಗಳ ಕಾರ್ಯಭಾರಕ್ಕೆ ಒಬ್ಬ ಅತಿಥಿ ಉಪನ್ಯಾಸಕರಿಗೆ ರೂ.9,000/-ಗಳನ್ನು ನೀಡಲಾಗುತ್ತಿತ್ತು. ಆದರೆ ಅದನ್ನು ಹೆಚ್ಚಿಸುವಂತೆ ಸಾಕಷ್ಟು ಬೇಡಿಕೆ ಬಂದಿದ್ದರಿಂದ ರೂ.12,000/-ಗಳಿಗೆ ಹೆಚ್ಚಿಸಲು ಕೋರುತ್ತಾ, ಅತಿಥಿ ಉಪನ್ಯಾಸಕರಿಗೆ ಮಾಹೆಯಾನ ರೂ.12,000/-ರಂತೆ ಒಟ್ಟು 3552 ಅತಿಥಿ ಉಪನ್ಯಾಸಕರುಗಳಿಗೆ 08 ತಿಂಗಳಿಗೆ ಭರಿಸಬೇಕಾದ ವೆಚ್ಚ ರೂ.34.09 ಕೋಟಿಗಳಾಗುತ್ತವೆ ಎಂಬ ಅಂಶದೊಂದಿಗೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿಷಯವಾರು ಖಾಲಿ ಇರುವ ಉಪನ್ಯಾಸಕರ ಹುದ್ದೆಗಳು ಹಾಗೂ ಅತಿಥಿ ಉಪನ್ಯಾಸಕರ ಅಗತ್ಯತೆ ಇರುವ

ಮಾಹಿತಿಯೊಂದಿಗೆ 2021-22ನೇ ಶೈಕ್ಷಣಿಕ ಸಾಲಿನಲ್ಲಿ 3552 ಅತಿಥಿ ಉಪನ್ಯಾಸಕರ ನೇಮಕಾತಿಗೆ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ರವರು ಮೇಲೆ (3) ರಲ್ಲಿ ಓದಲಾದ ಏಕ ಕಡತದಲ್ಲಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆರವರ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಇಪಿ 61 ಡಿಜಿಡಿ 2021**

**ಬೆಂಗಳೂರು, ದಿನಾಂಕ:26-10-2021.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ:ಇಡಿ 72 ಎಸ್‌ಟಿಬಿ 2016 ದಿನಾಂಕ:04-07-2016ರಲ್ಲಿನ ಷರತ್ತುಗಳಿಗೊಳಪಟ್ಟು 2021-22ನೇ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆದುರಾಗಿ ಈ ಕೆಳಕಂಡಂತೆ ಅತಿಥಿ ಉಪನ್ಯಾಸಕರನ್ನು ನೇಮಕಾತಿ ಮಾಡಿಕೊಳ್ಳಲು ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆರವರಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ.

| ಅತಿಥಿ ಉಪನ್ಯಾಸಕರ ಸಂಖ್ಯೆ | ಮಾಸಿಕ ಗೌರವಧನ | ಒಟ್ಟು ತಿಂಗಳು | ಒಟ್ಟು ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|---|
| 3552 | ರೂ.9,000/- | 08 | 2557.44 |

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:ಆಇ 446 ವೆಚ್ಚ-8/2021 ದಿನಾಂಕ:18-10-2021ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

26/10/21
(ಪದ್ಮಿನಿ ಎಸ್.ಎನ್.)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ(ಪದವಿ ಪೂರ್ವ ಶಿಕ್ಷಣ).

**ಇವರಿಗೆ:-**

1. ಮಹಾಲೇಖಪಾಲರು(ಎ & ಇ), ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು.
3. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ-8, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ(ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆರವರ ಮುಖಾಂತರ).
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

(3)

ಕರ್ನಾಟಕ ಸರ್ಕಾರ

ಸಂಖ್ಯೆ: ಪಪೂಶಿಇ/ಆ.ವಿ-ಎ/ವಿ.ನಿ-5/ಅ.ಉ.ನೇ/2021-22

ನಿರ್ದೇಶಕರ ಕಚೇರಿ
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡರಸ್ತೆ, ಮಲ್ಲೇಶ್ವರಂ,
ಬೆಂಗಳೂರು-560 012
ದಿನಾಂಕ:30 -10-2021.

# ಜ್ಞಾಪನ

**ವಿಷಯ**:- 2021-22ನೇ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಉಪನ್ಯಾಸಕರುಗಳ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರುಗಳನ್ನು ನೇಮಕ ಮಾಡಿಕೊಳ್ಳುವ ಬಗ್ಗೆ.

**ಉಲ್ಲೇಖ**:- ಸರ್ಕಾರದ ಆದೇಶ ಸಂಖ್ಯೆ: ಇಪಿ 61 ಡಿಜಿಡಿ 2021, ದಿನಾಂಕ:26/10/2021.

-*-

ಉಲ್ಲೇಖಿತ ಸರ್ಕಾರದ ಆದೇಶದಲ್ಲಿ, 2021-22ನೇ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ 3101 ಉಪನ್ಯಾಸಕರ ಹುದ್ದೆಗಳಗೆದುರಾಗಿ ಒಟ್ಟು 3552 ಉಪನ್ಯಾಸಕರ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರನ್ನು ಒಟ್ಟು ಎಂಟು(08) ತಿಂಗಳಿಗೆ ಮಾಸಿಕ ರೂ.9,000(ಒಂಭತ್ತು ಸಾವಿರ ಮಾತ್ರ)ರಂತೆ ಗೌರವಧನದ ಆಧಾರದಲ್ಲಿ ನೇಮಕಾತಿ ಮಾಡಿಕೊಳ್ಳಲು ಆದೇಶಿಸಲಾಗಿದ್ದು, ಮಾರ್ಚ್ 2022ರ ಅಂತ್ಯಕ್ಕೆ ಖಾಲಿಯಾಗುವ ಹುದ್ದೆಗಳಿಗೆ, ಕಾರ್ಯಭಾರ ಕಡಿಮೆ ಇರುವ ವಿವಿಧ ವಿಷಯಗಳ ಉಪನ್ಯಾಸಕರುಗಳನ್ನು ಸರಿದೂಗಿಸಿದ ನಂತರ ಲಭ್ಯವಾಗುವ 2033 ಹುದ್ದೆಗಳಿಗೆ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಲು ಅನುಮತಿಸಿದೆ.

ಸರ್ಕಾರದ ಆದೇಶ ಸಂಖ್ಯೆ ಇಡಿ 72 ಎಸ್‌ಟಿಬಿ 2016, ದಿನಾಂಕ:04-07-2016ರಲ್ಲಿನ ಷರತ್ತಿಗೊಳಪಟ್ಟು ಮತ್ತು 2020-21ನೇ ಸಾಲಿನ ಆಯ-ವ್ಯಯ ಲೆಕ್ಕಶೀರ್ಷಿಕೆ 2202-02-109-0-13-034ರಡಿ ಗೌರವಧನ ಪಾವತಿಗಾಗಿ ಒದಗಿಸಿರುವ ಅನುದಾನದಿಂದ ಭರಿಸುವುದು.

ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳುವಾಗ ಈ ಕೆಳಕಂಡ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ನೇಮಕ ಮಾಡಕೊಳ್ಳಲು ಸೂಚಿಸಿದೆ.

1. ಸ್ನಾತಕೋತ್ತರ ಪದವಿಯಲ್ಲಿ ಕನಿಷ್ಠ ಶೇ.55ರಷ್ಟು ಅಂಕಗಳನ್ನು ಪಡೆದುಕೊಂಡು ಅಭ್ಯರ್ಥಿಗಳನ್ನು ಅತಿಥಿ ಉಪನ್ಯಾಸಕರಾಗಿ ನೇಮಕ ಮಾಡಿಕೊಳ್ಳುವುದು.
2. ಮಂಜೂರಾದ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳಿಗೆ ಮಾತ್ರ ಅತಿಥಿ ಉಪನ್ಯಾಸಕರ ಸೇವೆಯನ್ನು ಉಪಯೋಗಿಸಿಕೊಳ್ಳತಕ್ಕದ್ದು.
3. ಪ್ರತಿ ಅತಿಥಿ ಉಪನ್ಯಾಸಕರಿಗೆ ವಾರದಲ್ಲಿ ಗರಿಷ್ಠ 10 ಗಂಟೆಗಳ ಕಾರ್ಯಭಾರವನ್ನು ಮಾತ್ರ ನಿರ್ವಹಿಸಲು ಅನುಮತಿ ನೀಡಬಹುದು.
4. ಯಾವುದೇ ಕಾಲೇಜಿನಲ್ಲಿ ಪ್ರತಿ ವಿಷಯದಲ್ಲಿ ವಾರದಲ್ಲಿ 10/12 ಗಂಟೆಗಳಿಗಿಂತ ಜಾಸ್ತಿ ಕಾರ್ಯಭಾರವಿದ್ದಲ್ಲಿ ಇಬ್ಬರು ಅತಿಥಿ ಉಪನ್ಯಾಸಕರನ್ನು ಉಪಯೋಗಿಸಿಕೊಳ್ಳಬಹುದು.
5. ಈ ಅತಿಥಿ ಉಪನ್ಯಾಸಕರ ಸೇವೆಯನ್ನು ಖಾಯಂ ಉಪನ್ಯಾಸಕರ ನೇಮಕಾತಿ ಆಗುವವರೆಗೆ ಅಥವಾ 2021-22ನೇ ಶೈಕ್ಷಣಿಕ ವರ್ಷದ ಅಂತ್ಯದ ವರೆಗೆ ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಬಳಸಿಕೊಳ್ಳತಕ್ಕದ್ದು.

..2

(4)



6. ಸರ್ಕಾರದ ನಿಯಮಗಳಲ್ಲಿ ಈ ಅವಧಿಯಲ್ಲಿ ಖಾಯಂ ಉಪನ್ಯಾಸಕರು ನೇಮಕಾತಿ ಹೊಂದಿ ಕರ್ತವ್ಯಕ್ಕೆ ಹಾಜರಾದ ತಕ್ಷಣದಿಂದ ಅತಿಥಿ ಉಪನ್ಯಾಸಕರ ಕಾರ್ಯ ನಿರ್ವಹಣೆಯು ತಂತಾನೆ ರದ್ದಾಗುತ್ತದೆ.
7. ಪ್ರಾಚಾರ್ಯರ ಬೋಧನಾ ವಿಷಯವೇ ಇರುವ ಹುದ್ದೆ ಖಾಲಿ ಇದ್ದಲ್ಲಿ, ಅಂತಹ ಹುದ್ದೆಯ ಕಾರ್ಯಭಾರವು ವಾರದಲ್ಲಿ 10 ಗಂಟೆಗೆ ಮೀರದಿದ್ದಲ್ಲಿ ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸುವಂತಿಲ್ಲ.
8. ಕಾರ್ಯಭಾರ ಕಡಿಮೆ ಹೊಂದಿರುವ ಕಾಲೇಜಿನ ಉಪನ್ಯಾಸಕರನ್ನು ಖಾಲಿ ಹುದ್ದೆಗಳಿಗೆ ನಿಯೋಜಿಸಿದ ನಂತರ ಉಳಿಕೆ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರನ್ನು ನೇಮಿಸುವುದು.
9. ಉಪನ್ಯಾಸಕರೇ ಇಲ್ಲದಿರುವ ಕಡೆ ಹಾಗೂ ನಿಯೋಜನೆಯಂತಹ ಬದಲಿ ವ್ಯವಸ್ಥೆ ಮಾಡಲು ಸಾಧ್ಯವಿಲ್ಲದಿರುವ ಕಡೆ ಮಾತ್ರ ಅತಿಥಿ ಉಪನ್ಯಾಸಕರನ್ನು ಉಪಯೋಗಿಸಿಕೊಳ್ಳಬಹುದು.
10. ಆಯಾ ವಿಷಯದಲ್ಲಿ ಅತಿಥಿ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸಲು ಒಬ್ಬರಿಗಿಂತ ಹೆಚ್ಚು ವ್ಯಕ್ತಿಗಳು ಮುಂದೆ ಬಂದಲ್ಲಿ ಅಂತಹವರ ಪೈಕಿ ಸ್ನಾತಕೋತ್ತರ ಪದವಿಯಲ್ಲಿ ಹೆಚ್ಚಿನ ಅಂಕ ಪಡೆವರನ್ನು ಆಯಾ ಕಾಲೇಜಿನ ಪ್ರಾಚಾರ್ಯರು ಹಾಗೂ ಕಾಲೇಜಿನ ಹಿರಿಯ ಉಪನ್ಯಾಸಕರು ಇರುವ ಸಮಿತಿಯ ಮೂಲಕ ಆಯ್ಕೆ ಮಾಡತಕ್ಕದ್ದು.
11. ಅತಿಥಿ ಉಪನ್ಯಾಸಕರಿಗೆ ನೀಡುವ ಗೌರವ ಧನವನ್ನು ವೇತನ ಲೆಕ್ಕ ಶೀರ್ಷಿಕೆ "2202-02-109-0-13" ಇದರಡಿ ಭರಿಸುವುದು.
12. ಅತಿಥಿ ಉಪನ್ಯಾಸಕರುಗಳ ಸೇವೆಯನ್ನು ಬಳಸಿಕೊಳ್ಳುವಾಗ ಅವರಿಗೆ ಸಕ್ಷಮ ಪ್ರಾಧಿಕಾರದ ಆದೇಶದವಿಲ್ಲದೆ ಯಾವುದೇ ಆದೇಶವನ್ನು ನೀಡಬಾರದು. ಇವರ ಹೆಸರುಗಳನ್ನು ಖಾಯಂ ಸಿಬ್ಬಂದಿಯ ಹಾಜರಾತಿ ವಹಿಯಲ್ಲಿ ನಮೂದಿಸಬಾರದು. ಗೌರವಧನ ವಿತರಿಸಿದ್ದಕ್ಕೆ ಅವರಿಂದ ಸೂಕ್ತ ರಸೀದಿಯನ್ನು ಪಡೆದುಕೊಳ್ಳುವುದು.
13. ಈ ರೀತಿ ನೇಮಕ ಮಾಡಿಕೊಂಡ ಉಪನ್ಯಾಸಕರಿಗೆ ಯಾವುದೇ ರೀತಿಯ ಸೇವಾ ಪ್ರಮಾಣ ಪತ್ರ ನೀಡಬಾರದು ಹಾಗೂ ಸೇವಾ ಪುಸ್ತಕ ತೆರೆಯಬಾರದು. ಅಲ್ಲದೆ ಹಾಜರಾತಿಯನ್ನು ಪ್ರತ್ಯೇಕವಾಗಿ ಪ್ರಾಚಾರ್ಯರೇ ನಿರ್ವಹಿಸತಕ್ಕದ್ದು.
14. ಯಾವುದೇ ಸರ್ಕಾರಿ/ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ/ಸಂಸ್ಥೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವವರನ್ನು ಅತಿಥಿ ಉಪನ್ಯಾಸಕರಾಗಿ ನೇಮಿಸಿಕೊಳ್ಳತಕ್ಕದ್ದಲ್ಲ.
15. ಈ ರೀತಿ ಆಯ್ಕೆಯಾಗುವ ಅತಿಥಿ ಉಪನ್ಯಾಸಕರು, ಅತಿಥಿ ಉಪನ್ಯಾಸಕರಾಗಿ ಸಲ್ಲಿಸುವ ಸೇವೆಯು ಇತರೆ ಯಾವುದೇ ಸರ್ಕಾರಿ ಸೇವಾ ಸಕ್ರಮಾತಿಗೆ ಪರಿಗಣಿಸತಕ್ಕದ್ದಲ್ಲ.
16. ದೀರ್ಘಾವಧಿ ರಜೆಯಿಂದ ಉಂಟಾಗುವ ಖಾಲಿ ಹುದ್ದೆಗೆ ಅಥವಾ ಅನಧಿಕೃತ ಗೈರು ಹಾಜರಿಯಿಂದ ಉಂಟಾಗುವ ಖಾಲಿ ಹುದ್ದೆಗಳಿಗೆ ನೇಮಕ ಮಾಡಿಕೊಳ್ಳಬಾರದು.
17. ನೇಮಕ ಮಾಡಿಕೊಂಡ ಅತಿಥಿ ಉಪನ್ಯಾಸಕರ ವಿವರಗಳನ್ನು ಮಾತ್ರ ಕಡ್ಡಾಯವಾಗಿ ಜಿಲ್ಲಾ ಉಪನಿರ್ದೇಶಕರಿಗೆ ಕಳುಹಿಸತಕ್ಕದ್ದು. ಈ ಕಛೇರಿಗೆ ಯಾವುದೇ ಅಡಕಗಳನ್ನು ಕಳುಹಿಸಕೂಡದು.
18. ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಡಿಮೆ ಕಾರ್ಯಭಾರವಿರುವ ವಿಷಯಗಳ ಉಪನ್ಯಾಸಕರುಗಳನ್ನು ಜಿಲ್ಲೆಯ ಅವಶ್ಯಕ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯಭಾರ ಸರಿದೂರಿಸಲು ತಿಳಿಸಿದೆ. ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರುಗಳು ಸದರಿ ಮಾಹಿತಿಯನ್ನು ಜಿಲ್ಲಾ ಉಪನಿರ್ದೇಶಕರುಗಳಿಗೆ ಒದಗಿಸತಕ್ಕದ್ದು.

19. ಕಡಿಮೆ ಕಾರ್ಯಭಾರವಿರುವ ವಿಷಯಗಳ ಉಪನ್ಯಾಸಕರುಗಳನ್ನು ಬೇರೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಸರಿದೂಗಿಸಲು ಲಭ್ಯವಿಲ್ಲದ ಪಕ್ಷದಲ್ಲಿ ಅಂತಹ ಉಪನ್ಯಾಸಕರುಗಳ ಮಾಹಿತಿಯನ್ನು ಇಲಾಖೆಗೆ ತಪ್ಪದೇ ಸಲ್ಲಿಸತಕ್ಕದ್ದು
20. ಕಡಿಮೆ ಕಾರ್ಯಭಾರವಿರುವ ವಿಷಯಗಳ ಉಪನ್ಯಾಸಕರುಗಳನ್ನು ಜಿಲ್ಲೆಯ ಅವಶ್ಯಕ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯಭಾರ ಸರಿದೂರಿಸಲು ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರುಗಳು ಮಾಹಿತಿಯನ್ನು ಜಿಲ್ಲಾ ಉಪನಿರ್ದೇಶಕರುಗಳಿಗೆ ಒದಗಿಸದಿದ್ದಲ್ಲಿ ಅಥವಾ ಅಂತಹ ವಿಷಯಗಳ ಉಪನ್ಯಾಸಕರನ್ನು ಜಿಲ್ಲಾ ಉಪನಿರ್ದೇಶಕರು ಕಾರ್ಯಭಾರ ಸರಿದೂಗಿಸಲು ಬಳಸಿಕೊಳ್ಳದೇ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಂಡು, ಅತಿಥಿ ಉಪನ್ಯಾಸಕರ ಗೌರವಧನವನ್ನು ದುರುಪಯೋಗ ಪಡಿಸಿಕೊಳ್ಳುವುದು ಕಂಡುಬಂದಲ್ಲಿ, ಅಂತಹ ಇಲಾಖಾ ಸಿಬ್ಬಂದಿಗಳ ಮೇಲೆ ನಿಯಮಾನುಸಾರ ಶಿಸ್ತುಕ್ರಮ ಜರುಗಿಸಲಾಗುವುದು.
21. ಈ ಹಿಂದಿನ ಶೈಕ್ಷಣಿಕ ಸಾಲಿನಲ್ಲಿ ಅತಿಥಿ ಉಪನ್ಯಾಸಕರನ್ನು ನೇಮಕಾತಿ ಮಾಡಿಕೊಳ್ಳುವಾಗ ಸರ್ಕಾರದ ನಿಯಮಗಳನ್ನು ಹಾಗೂ ಇಲಾಖೆಯ ನಿರ್ದೇಶನವನ್ನು ಪಾಲಿಸದೇ, ಅಂದರೆ, ಕಾರ್ಯಭಾರವನ್ನು ಸರಿದೂಗಿಸದೇ ಅಥವಾ ಅವಶ್ಯಕತೆ ಇಲ್ಲದೇ ಇರುವ ಕಾಲೇಜುಗಳಿಗೂ ಸಹ ಅತಿಥಿ ಉಪನ್ಯಾಸಕರನ್ನು ನೇಮಕಾತಿ ಮಾಡಿ ಗೌರವಧನವನ್ನು ವಿತರಿಸಿರುವುದಾಗಿ ಗುರುತರವಾದ ಆಪಾದನೆಗಳನ್ನು/ದೂರುಗಳನ್ನು ಅನೇಕ ಜಿಲ್ಲಾ ಉಪನಿರ್ದೇಶಕರ ಮೇಲೆ ಇಲಾಖೆಯಲ್ಲಿ ಸ್ವೀಕೃತಗೊಂಡಿರುತ್ತದೆ. ಈ ಹಿನ್ನೆಲೆಯಲ್ಲಿ, ಸದರಿ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಸರ್ಕಾರದ ನಿಯಮ ಹಾಗೂ ಇಲಾಖೆಯ ನಿರ್ದೇಶನಗಳನ್ನು ಪಾಲಿಸಲು ಆದೇಶಿಸಿದೆ. ತಪ್ಪಿದಲ್ಲಿ, ಅಂತಹ ಜಿಲ್ಲಾ ಉಪನಿರ್ದೇಶಕರು/ಪ್ರಾಂಶುಪಾಲರ ಮೇಲೆ ನಿಯಮಾನುಸಾರ ಸರ್ಕಾರಕ್ಕೆ ಶಿಸ್ತುಕ್ರಮ ಜರುಗಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುವುದು.

***(ಟಿಪ್ಪಣಿ ಮಾನ್ಯ ನಿರ್ದೇಶಕರಿಂದ ಅನುಮೋದಿಸಲ್ಪಟ್ಟಿದೆ)***

20/10/21

ಜಂಟಿ ನಿರ್ದೇಶಕರು(ಆಡಳಿತ),
ಪದವಿ ಪೂರ್ವ ಶಿಕ್ಷಣ ಇಲಾಖೆ.

<u>ಪ್ರತಿಯನ್ನು:</u>

1. ನಿರ್ದೇಶಕರ ಆಪ್ತಶಾಖೆ, ಜಂಟಿ ನಿರ್ದೇಶಕರು(ಆ), ಉಪ ನಿರ್ದೇಶಕರು(ಆ).
2. ಲೆಕ್ಕಪತ್ರಾಧಿಕಾರಿಗಳು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು.
3. ರಾಜ್ಯದ ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳಿಗೆ – ತಮ್ಮ ಜಿಲ್ಲೆಯಲ್ಲಿ ಪ್ರಾಚಾರ್ಯರುಗಳು ಮಾಡಿಕೊಂಡ ಅತಿಥಿ ಉಪನ್ಯಾಸಕರ ಕ್ರೋಢೀಕೃತ ವಿಷಯವಾರು ಸಂಖ್ಯೆ ವಿವರಗಳನ್ನು ಮೇಲೆ ತಿಳಿಸಿರುವ ವಿಳಾಸಕ್ಕೆ ಕಳುಹಿಸಿಕೊಡಲು ತಿಳಿಸಿದೆ.
4. **ರಾಜ್ಯದ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರುಗಳಿಗೆ ನೇಮಕ ಮಾಡಿಕೊಂಡ ಅತಿಥಿ ಉಪನ್ಯಾಸಕರ ವಿವರಗಳನ್ನು (ಈ ಕಛೇರಿಗೆ ಕಳುಹಿಸಕೂಡದು) ಜಿಲ್ಲಾ ಉಪ ನಿರ್ದೇಶಕರಿಗೆ ಮಾತ್ರ ತಪ್ಪದೇ ಕಳುಹಿಸಲು ತಿಳಿಸಿದೆ.**
5. ಕೇಂದ್ರ ಕಛೇರಿಯ ಸಹಾಯಕ ನಿರ್ದೇಶಕರು/ಶಾಖಾಧಿಕಾರಿ/ಅಧೀಕ್ಷಕರುಗಳ ಮಾಹಿತಿ
6. ಕಛೇರಿ ಪ್ರತಿ.

| ಕ್ರಮ ಸಂಖ್ಯೆ | ಜಿಲ್ಲೆಗಳು | ಮಾರ್ಚ್ 2022ರ ಅಂತ್ಯಕ್ಕೆ ಖಾಲಿಯಿರುವ ಉಪನ್ಯಾಸಕರ ಹುದ್ದೆಗಳ ಸಂಖ್ಯೆ | ಕಡಿಮೆ ಕಾರ್ಯಭಾರವಿರುವ ವಿಷಯಗಳ ಉಪನ್ಯಾಸಕರ ಸಂಖ್ಯೆ | ಕಾರ್ಯಭಾರವನ್ನು ಸರಿದೂಗಿಸಿದ ನಂತರ ಉಳಿದ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಬೇಕಾದ ಸಂಖ್ಯೆ . |
|---|---|---|---|---|
| 1 | ಬೆಂಗಳೂರು ಉತ್ತರ | 47 | 54 | 0 |
| 2 | ಬೆಂಗಳೂರು ದಕ್ಷಿಣ | 52 | 32 | 20 |
| 3 | ಬೆಂಗಳೂರು ಗ್ರಾಮಾಂತರ | 60 | 15 | 45 |
| 4 | ರಾಮನಗರ | 80 | 40 | 40 |
| 5 | ಬಳ್ಳಾರಿ | 110 | 44 | 66 |
| 6 | ಚಿಕ್ಕೋಡಿ | 112 | 67 | 45 |
| 7 | ಬೆಳಗಾವಿ | 97 | 31 | 66 |
| 8 | ಬಾಗಲಕೋಟೆ | 123 | 62 | 61 |
| 9 | ವಿಜಯಪುರ | 82 | 18 | 64 |
| 10 | ಬೀದರ್ | 39 | 15 | 24 |
| 11 | ದಾವಣಗೆರೆ | 79 | 34 | 45 |
| 12 | ಚಿತ್ರದುರ್ಗ | 121 | 80 | 41 |
| 13 | ಚಿಕ್ಕಮಗಳೂರು | 143 | 35 | 108 |
| 14 | ಗದಗ | 87 | 25 | 62 |
| 15 | ಹಾವೇರಿ | 93 | 63 | 30 |
| 16 | ಧಾರವಾಡ | 50 | 22 | 28 |
| 17 | ಕಲಬುರಗಿ | 105 | 53 | 52 |
| 18 | ಯಾದಗಿರಿ | 85 | 24 | 61 |
| 19 | ಹಾಸನ | 193 | 66 | 127 |
| 20 | ಚಿಕ್ಕಬಳ್ಳಾಪುರ | 87 | 31 | 56 |
| 21 | ಕೋಲಾರ | 131 | 44 | 87 |
| 22 | ಚಾಮರಾಜನಗರ | 75 | 20 | 55 |
| 23 | ಮೈಸೂರು | 130 | 40 | 90 |
| 24 | ಮಂಡ್ಯ | 154 | 78 | 76 |
| 25 | ಉತ್ತರ ಕನ್ನಡ | 121 | 14 | 107 |
| 26 | ಕೊಪ್ಪಳ | 100 | 25 | 75 |
| 27 | ರಾಯಚೂರು | 92 | 41 | 51 |
| 28 | ದಕ್ಷಿಣ ಕನ್ನಡ | 196 | 48 | 148 |
| 29 | ಉಡುಪಿ | 143 | 69 | 74 |
| 30 | ಶಿವಮೊಗ್ಗ | 95 | 65 | 30 |
| 31 | ತುಮಕೂರು | 250 | 72 | 178 |
| 32 | ಕೊಡಗು | 48 | 27 | 21 |
| | ಒಟ್ಟು | | | 2033 |

20/10/22

ಜಂಟಿ ನಿರ್ದೇಶಕರು (ಆ)
ಪದವಿ ಪೂರ್ವ ಶಿಕ್ಷಣ ಇಲಾಖೆ
ಬೆಂಗಳೂರು

(7)

ಕರ್ನಾಟಕ ಸರ್ಕಾರ

ಸಂಖ್ಯೆ: ಪಪೂಶಿಇ/ಆ.ವಿ-ಎ/ವಿ.ನಿ-5/ಅ.ಉ.ನೇ/2021-22

ನಿರ್ದೇಶಕರ ಕಚೇರಿ
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡರಸ್ತೆ, ಮಲ್ಲೇಶ್ವರಂ,
ಬೆಂಗಳೂರು-560 012
ದಿನಾಂಕ: 18-11-2021.

## ಜ್ಞಾಪನ

**ವಿಷಯ:-** 2021-22ನೇ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಉಪನ್ಯಾಸಕರುಗಳ ಹುದ್ದೆಗಳನ್ನು ಹೊರತುಪಡಿಸಿ ಇತರೆ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರುಗಳನ್ನು ನೇಮಕ ಮಾಡಿಕೊಳ್ಳುವ ಬಗ್ಗೆ.

**ಉಲ್ಲೇಖ:**-1. ಸರ್ಕಾರದ ಆದೇಶ ಸಂಖ್ಯೆ: ಇಪಿ 61 ಡಿಜಿಡಿ 2021, ದಿನಾಂಕ:26/10/2021.
2. ಈ ಕಚೇರಿ ಸಮಸಂಖ್ಯೆ ಜ್ಞಾಪನ ದಿನಾಂಕ:30-10-2021.
3. ಜಿಲ್ಲಾ ಉಪನಿರ್ದೇಶಕರುಗಳ ಮನವಿ ಪತ್ರಗಳು.

—*—

ಪದವಿ ಪೂರ್ವ ಶಿಕ್ಷಣ ಇಲಾಖೆಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಉಪನ್ಯಾಸಕರ ಹುದ್ದೆಗಳಿಗೆ, ಅತಿಥಿ ಉಪನ್ಯಾಸಕರುಗಳನ್ನು ನೇಮಕ ಮಾಡಿಕೊಳ್ಳಲು ಉಲ್ಲೇಖ-1ರಲ್ಲಿ ಆದೇಶಿಸಲಾಗಿದೆ.

ಅದರಂತೆ, ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿದ್ದ ಉಪನ್ಯಾಸಕರ ಹುದ್ದೆಗಳಿಗೆದುರಾಗಿ, ಕಡಿಮೆ ಕಾರ್ಯಭಾರವಿರುವ ವಿಷಯಗಳ ಉಪನ್ಯಾಸಕರುಗಳನ್ನು ಸರುದೂಗಿಸಿದ ನಂತರ ಉಳಿದ ಹುದ್ದೆಗಳಿಗೆ 2033 ಅತಿಥಿ ಉಪನ್ಯಾಸಕರುಗಳನ್ನು ನೇಮಕ ಮಾಡಿಕೊಳ್ಳಲು ಉಲ್ಲೇಖ-2 ರಂತೆ ಆದೇಶಿಸಲಾಗಿತ್ತು.

ಆದರೆ, 2020-21ನೇ ಸಾಲಿನ ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆಯಲ್ಲಿ ಶೇ.100ರಷ್ಟು ವಿದ್ಯಾರ್ಥಿಗಳು ಉತ್ತೀರ್ಣ ಹೊಂದಿದ ಹಿನ್ನೆಲೆಯಲ್ಲಿ, 2021-21ನೇ ಸಾಲಿಗೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ವಿವಿಧ ಸಂಯೋಜನೆಗಳಲ್ಲಿ ಹೆಚ್ಚಿನ ವಿದ್ಯಾರ್ಥಿಗಳು ದಾಖಲಾತಿ ಹೊಂದಿರುತ್ತಾರೆ. ಈ ಹಿನ್ನೆಲೆಯಲ್ಲಿ, ಹೆಚ್ಚುವರಿ ಕಾರ್ಯಭಾರವಿರುವ ವಿಷಯಗಳಿಗೆ, ಹೊಸ ಸಂಯೋಜನೆಗಳನ್ನು ಮಂಜೂರು ಮಾಡಿ, ಸದರಿ ಸಂಯೋಜನೆಗೆ ವಿದ್ಯಾರ್ಥಿಗಳು ದಾಖಲಾಗಿದ್ದು, ಹುದ್ದೆ ಮಂಜೂರಾಗದೆ ಇರುವ ಮತ್ತು ಬಡ್ತಿ ಹಾಗೂ ಇನ್ನಿತರ ಕಾರಣಗಳಿಂದ ತೆರವಾದ ಹುದ್ದೆಗಳಿಗೆ (ಖಾಲಿ ಹುದ್ದೆಗಳನ್ನು **ಹೊರತು ಪಡಿಸಿ**) ಒಟ್ಟು 1234 ಹೆಚ್ಚುವರಿ ಅತಿಥಿ ಉಪನ್ಯಾಸಕರುಗಳನ್ನು ನೇಮಕ ಮಾಡಿಕೊಳ್ಳಲು ಉಲ್ಲೇಖ-3ರಂತೆ ಮನವಿ ಸಲ್ಲಿಸಿರುತ್ತಾರೆ.

ಆದ್ದರಿಂದ, ಹೆಚ್ಚುವರಿ ಕಾರ್ಯಭಾರವಿರುವ ವಿಷಯಗಳಿಗೆ, ಹೊಸ ಸಂಯೋಜನೆಗಳನ್ನು ಮಂಜೂರು ಮಾಡಿ, ಸದರಿ ಸಂಯೋಜನೆಗೆ ವಿದ್ಯಾರ್ಥಿಗಳು ದಾಖಲಾಗಿದ್ದು, ಹುದ್ದೆ ಮಂಜೂರಾಗದೆ ಇರುವ ಮತ್ತು ಬಡ್ತಿ ಹಾಗೂ ಇನ್ನಿತರ ಕಾರಣಗಳಿಂದ ತೆರವಾದ ಹುದ್ದೆಗಳಿಗೆ **(ಖಾಲಿ ಹುದ್ದೆಗಳನ್ನು ಹೊರತು ಪಡಿಸಿ)** ಒಟ್ಟು 1234 ಹೆಚ್ಚುವರಿ ಅತಿಥಿ ಉಪನ್ಯಾಸಕರುಗಳಿಗೆ ಗೌರವಧನ ನೀಡಲು ಅನುದಾನ ಮಂಜೂರು ಮಾಡಲು ಆದೇಶಿಸಿದೆ. ಅನುಬಂಧ-2ರಲ್ಲಿ ಜಿಲ್ಲಾವಾರು ಅಗತ್ಯವಿರುವ ಒಟ್ಟು ಅತಿಥಿ ಉಪನ್ಯಾಸಕರ ಮಾಹಿತಿ ಒದಗಿಸಿದೆ.

2.........

**ವಿಶೇಷ ಸೂಚನೆ:- ಅತಿಥಿ ಉಪನ್ಯಾಸಕರನ್ನು ನೇಮಕಾತಿ ಮಾಡಿಕೊಳ್ಳುವಾಗ ಸರ್ಕಾರದ ನಿಯಮಗಳನ್ನು ಹಾಗೂ ಇಲಾಖೆಯ ನಿರ್ದೇಶನವನ್ನು ಕಡ್ಡಾಯವಾಗಿ ಪಾಲಿಸುವುದು. ಕಾರ್ಯಭಾರ ಇಲ್ಲದೇ ಇರುವ ಉಪನ್ಯಾಸಕರನ್ನು ಕಾರ್ಯಭಾರ ಅಗತ್ಯತೆ ಇರುವ ಕಾಲೇಜಿಗೆ ನಿಯೋಜಿಸುವ ಮೂಲಕ ಕಾರ್ಯಭಾರವನ್ನು ಸರಿದೂಗಿಸುವ ಕುರಿತು ಜಿಲ್ಲಾ ಉಪ ನಿರ್ದೇಶಕರು ಅಗತ್ಯ ಕ್ರಮ ಕೈಗೊಳ್ಳುವುದು. ನಿಯೋಜನೆಯ ನಂತರ ಉಳಿಯುವ ಹುದ್ದೆಗಳಿಗೆ ಅವಶ್ಯಕತೆ ಇದ್ದಲ್ಲಿ ಮಾತ್ರ ಅತಿಥಿ ಉಪನ್ಯಾಸಕರನ್ನು ನೇಮಕಾತಿ ಮಾಡಿಕೊಳ್ಳುವ ಕುರಿತು ಕ್ರಮ ಕೈಗೊಳ್ಳುವುದು. ಸರ್ಕಾರದ ನಿಯಮಗಳನ್ನು ಹಾಗೂ ಇಲಾಖೆಯ ನಿರ್ದೇಶನವನ್ನು ಪಾಲಿಸದೇ ಅತಿಥಿ ಉಪನ್ಯಾಸಕರನ್ನು ನೇಮಕಾತಿ ಮಾಡಿ ಗೌರವಧನವನ್ನು ವಿತರಿಸಿದಲ್ಲಿ ಅಂತಹ ಜಿಲ್ಲಾ ಉಪನಿರ್ದೇಶಕರು/ ಪ್ರಾಂಶುಪಾಲರ ಮೇಲೆ ನಿಯಮಾನುಸಾರ ಶಿಸ್ತುಕ್ರಮ ಜರುಗಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುವುದು.**

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

<u>ರವರಿಗೆ:</u>

1. ಸಹಾಯಕ ನಿರ್ದೇಶಕರು, ಲೆಕ್ಕಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು-ರವರಿಗೆ ಅಗತ್ಯ ಕ್ರಮಕ್ಕಾಗಿ.

ಪ್ರತಿ:-

1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳಿಗೆ – ಮಾಹಿತಿಗಾಗಿ.

(9)

# ಅನುಬಂಧ-2

| ಕ್ರಮ ಸಂಖ್ಯೆ | ಜಿಲ್ಲೆ | ಜಿಲ್ಲಾ ಉಪ ನಿರ್ದೇಶಕರ ಖಾಲಿ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರ ನೇಮಕಾತಿ ಕೋರಿ ಮನವಿ | | ಕಾರ್ಯಭಾರವನ್ನು ಸರಿದೂಗಿಸಿದ ನಂತರ ಉಳಿದ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರನ್ನು ದಿ: 30.1021 ರಂದು ನೇಮಕ ಮಾಡಿದ ಸಂಖ್ಯೆ | ಜಿಲ್ಲಾ ಉಪ ನಿರ್ದೇಶಕರ ಹೆಚ್ಚುವರಿ ಅತಿಥಿ ಉಪನ್ಯಾಸಕರ ನೇಮಕಾತಿ ಕೋರಿ ಮನವಿ | | | ಖಾಲಿ ಹುದ್ದೆಗಳನ್ನು ಹೊರತುಪಡಿಸಿ ಬೇಕಾಗುವ ಒಟ್ಟು ಅತಿಥಿ ಉಪನ್ಯಾಸಕರ ಸಂಖ್ಯೆ |
|---|---|---|---|---|---|---|---|---|
| | | ಮಾರ್ಚ್ 2021ರ ಅಂತ್ಯಕ್ಕೆ ಖಾಲಿಯಿರುವ ಉಪನ್ಯಾಸಕರ ಹುದ್ದೆಗಳ ಸಂಖ್ಯೆ | ಕಡಿಮೆ ಕಾರ್ಯಭಾರವಿರುವ ವಿಷಯಗಳ ಉಪನ್ಯಾಸಕರ ಸಂಖ್ಯೆ | | ಹೆಚ್ಚುವರಿ ಕಾರ್ಯಭಾರವಿರುವ ವಿಷಯಗಳಿಗೆ ಬೇಕಾಗುವ ಅತಿಥಿ ಉಪನ್ಯಾಸಕರ ಸಂಖ್ಯೆ (10 ಗಂಟೆಗಿಂತ ಹೆಚ್ಚಿನ ಕಾರ್ಯಭಾರವಿರುವ ವಿಷಯಗಳು ) | ಹೊಸ ಸಂಯೋಜನೆಗಳಲ್ಲಿ, ವಿದ್ಯಾರ್ಥಿಗಳಿದ್ದು, ಹುದ್ದೆ ಮಂಜೂರಾಗದ ವಿಷಯಗಳಿಗೆ ಬೇಕಾಗುವ ಅತಿಥಿ ಉಪನ್ಯಾಸಕರ ಸಂಖ್ಯೆ | ಬಡ್ತಿ ಹಾಗೂ ಇನ್ನಿತರ ಕಾರಣಗಳಿಂದ ತೆರವಾಗುವ ಹುದ್ದೆಗಳಿಗೆ ಬೇಕಾಗುವ ಅತಿಥಿ ಉಪನ್ಯಾಸಕರ ಸಂಖ್ಯೆ | |
| 1 | 2 | 3 | 4 | 5 (3-4) | 6 | 7 | 8 | 9 (6+7+8) |
| 1 | AN-BANGALORE NORTH | 47 | 54 | 00 | 30 | 33 | 27 | 90 |
| 2 | AS-BANGALORE SOUTH | 52 | 32 | 20 | 07 | 22 | 00 | 29 |
| 3 | BB-BANGALORE RURAL | 60 | 15 | 45 | 05 | 05 | 04 | 14 |
| 4 | BR-RAMANAGAR | 80 | 40 | 40 | 28 | 03 | 00 | 31 |
| 5 | CC-BELLARY | 110 | 44 | 66 | 30 | 21 | 14 | 65 |
| 6 | DC-CHIKODI | 112 | 67 | 45 | 49 | 18 | 00 | 67 |
| 7 | DD-BELGAUM | 97 | 31 | 66 | 50 | 06 | 02 | 58 |
| 8 | EB-BAGALKOT | 123 | 62 | 61 | 32 | 06 | 04 | 42 |
| 9 | EE-BIJAPUR | 82 | 18 | 64 | 38 | 05 | 00 | 43 |
| 10 | FF-BIDAR | 39 | 15 | 24 | 24 | 04 | 03 | 31 |
| 11 | GD-DAVANGERE | 79 | 34 | 45 | 05 | 01 | 00 | 06 |
| 12 | GG-CHITRADURGA | 121 | 80 | 41 | 06 | 10 | 04 | 20 |

ಜಂಟಿ ನಿರ್ದೇಶಕರು (ಆಡಳಿತ)
ಪದವಿ ಪೂರ್ವ ಶಿಕ್ಷಣ ಇಲಾಖೆ
ಬೆಂಗಳೂರು - 560 012

| ಕ್ರ ಸಂಖ್ಯೆ | ಜಿಲ್ಲೆ | ಜಿಲ್ಲಾ ಉಪ ನಿರ್ದೇಶಕರ ಖಾಲಿ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರ ನೇಮಕಾತಿ ಕೋರಿ ಮನವಿ: ಮಾರ್ಚ್ 2021ರ ಅಂತ್ಯಕ್ಕೆ ಖಾಲಿಯಿರುವ ಉಪನ್ಯಾಸಕರ ಹುದ್ದೆಗಳ ಸಂಖ್ಯೆ | ಜಿಲ್ಲಾ ಉಪ ನಿರ್ದೇಶಕರ ಖಾಲಿ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರ ನೇಮಕಾತಿ ಕೋರಿ ಮನವಿ: ಕಡಿಮೆ ಕಾರ್ಯಭಾರವಿರುವ ವಿಷಯಗಳ ಉಪನ್ಯಾಸಕರ ಸಂಖ್ಯೆ | ಕಾರ್ಯಭಾರವನ್ನು ಸರಿದೂಗಿಸಿದ ನಂತರ ಉಳಿದ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರನ್ನು ದಿ: 30.1021 ರಂದು ನೇಮಕ ಮಾಡಿದ ಸಂಖ್ಯೆ | ಜಿಲ್ಲಾ ಉಪ ನಿರ್ದೇಶಕರ ಹೆಚ್ಚುವರಿ ಅತಿಥಿ ಉಪನ್ಯಾಸಕರ ನೇಮಕಾತಿ ಕೋರಿ ಮನವಿ: ಹೆಚ್ಚುವರಿ ಕಾರ್ಯಭಾರವಿರುವ ವಿಷಯಗಳಿಗೆ ಬೇಕಾಗುವ ಅತಿಥಿ ಉಪನ್ಯಾಸಕರ ಸಂಖ್ಯೆ (10 ಗಂಟೆಗಿಂತ ಹೆಚ್ಚಿನ ಕಾರ್ಯಭಾರವಿರುವ ವಿಷಯಗಳು) | ಜಿಲ್ಲಾ ಉಪ ನಿರ್ದೇಶಕರ ಹೆಚ್ಚುವರಿ ಅತಿಥಿ ಉಪನ್ಯಾಸಕರ ನೇಮಕಾತಿ ಕೋರಿ ಮನವಿ: ಹೊಸ ಸಂಯೋಜನೆಗಳು, ವಿದ್ಯಾರ್ಥಿಗಳಿಚ್ಛು, ಹುದ್ದೆ ಮಂಜೂರಾಗದ ವಿಷಯಗಳಿಗೆ ಬೇಕಾಗುವ ಅತಿಥಿ ಉಪನ್ಯಾಸಕರ ಸಂಖ್ಯೆ | ಜಿಲ್ಲಾ ಉಪ ನಿರ್ದೇಶಕರ ಹೆಚ್ಚುವರಿ ಅತಿಥಿ ಉಪನ್ಯಾಸಕರ ನೇಮಕಾತಿ ಕೋರಿ ಮನವಿ: ಬಡ್ತಿ ಹಾಗೂ ಇನ್ನಿತರ ಕಾರಣಗಳಿಂದ ತೆರವಾಗುವ ಹುದ್ದೆಗಳಿಗೆ ಬೇಕಾಗುವ ಅತಿಥಿ ಉಪನ್ಯಾಸಕರ ಸಂಖ್ಯೆ | ಖಾಲಿ ಹುದ್ದೆಗಳನ್ನು ಹೊರತುಪಡಿಸಿ ಬೇಕಾಗುವ ಒಟ್ಟು ಅತಿಥಿ ಉಪನ್ಯಾಸಕರ ಸಂಖ್ಯೆ |
|---|---|---|---|---|---|---|---|---|
| 1 | 2 | 3 | 4 | 5 (3-4) | 6 | 7 | 8 | 9 (6+7+8) |
| 13 | HH-CHICKMAGALUR | 143 | 35 | 108 | 10 | 05 | 00 | 15 |
| 14 | JG-GADAG | 87 | 25 | 62 | 00 | 03 | 00 | 03 |
| 15 | JH-HAVERI | 93 | 63 | 30 | 48 | 04 | 00 | 52 |
| 16 | JJ-DHARWAD | 50 | 22 | 28 | 00 | 00 | 00 | 00 |
| 17 | KK-GULBARGA | 105 | 53 | 52 | 05 | 06 | 08 | 19 |
| 18 | KY-YADGIR | 85 | 24 | 61 | 43 | 00 | 03 | 46 |
| 19 | LL-HASSAN | 193 | 66 | 127 | 00 | 14 | 12 | 26 |
| 20 | MC-CHIKKABALLAPUR | 87 | 31 | 56 | 28 | 10 | 00 | 38 |
| 21 | MM-KOLAR | 131 | 44 | 87 | 19 | 05 | 05 | 29 |
| 22 | NC-CHAMARAJANAGAR | 75 | 20 | 55 | 00 | 01 | 03 | 04 |
| 23 | NN-MYSORE | 130 | 40 | 90 | 91 | 37 | 11 | 139 |
| 24 | PP-MANDYA | 154 | 78 | 76 | 04 | 03 | 06 | 13 |
| 25 | QQ-NORTH CANARA | 121 | 14 | 107 | 14 | 00 | 03 | 17 |
| 26 | RK-KOPPAL | 100 | 25 | 75 | 27 | 24 | 01 | 52 |

ಜಂಟಿ ನಿರ್ದೇಶಕರು (ಆಡಳಿತ),
ಪದವಿ ಪೂರ್ವ ಶಿಕ್ಷಣ ಇಲಾಖೆ
ಬೆಂಗಳೂರು - 560 012

| ಕ್ರಮ ಸಂಖ್ಯೆ | ಜಿಲ್ಲೆ | ಜಿಲ್ಲಾ ಉಪ ನಿರ್ದೇಶಕರ ಖಾಲಿ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರ ನೇಮಕಾತಿ ಕೋರಿ ಮನವಿ | | ಕಾರ್ಯಭಾರವನ್ನು ಸರಿದೂಗಿಸಿದ ನಂತರ ಉಳಿದ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರನ್ನು ದಿ: 30.1021 ರಂದು ನೇಮಕ ಮಾಡಿದ ಸಂಖ್ಯೆ | ಜಿಲ್ಲಾ ಉಪ ನಿರ್ದೇಶಕರ ಹೆಚ್ಚುವರಿ ಅತಿಥಿ ಉಪನ್ಯಾಸಕರ ನೇಮಕಾತಿ ಕೋರಿ ಮನವಿ | | | ಖಾಲಿ ಹುದ್ದೆಗಳನ್ನು ಹೊರತುಪಡಿಸಿ ಬೇಕಾಗುವ ಒಟ್ಟು ಅತಿಥಿ ಉಪನ್ಯಾಸಕರ ಸಂಖ್ಯೆ |
|---|---|---|---|---|---|---|---|---|
| | | ಮಾರ್ಚ್ 2021ರ ಅಂತ್ಯಕ್ಕೆ ಖಾಲಿಯಿರುವ ಉಪನ್ಯಾಸಕರ ಹುದ್ದೆಗಳ ಸಂಖ್ಯೆ | ಕಡಿಮೆ ಕಾರ್ಯಭಾರವಿರುವ ವಿಷಯಗಳ ಉಪನ್ಯಾಸಕರ ಸಂಖ್ಯೆ | | ಹೆಚ್ಚುವರಿ ಕಾರ್ಯಭಾರವಿರುವ ವಿಷಯಗಳಿಗೆ ಬೇಕಾಗುವ ಅತಿಥಿ ಉಪನ್ಯಾಸಕರ ಸಂಖ್ಯೆ (10 ಗಂಟೆಗಿಂತ ಹೆಚ್ಚಿನ ಕಾರ್ಯಭಾರವಿರುವ ವಿಷಯಗಳು ) | ಹೊಸ ಸಂಯೋಜನೆಗಳಲ್ಲಿ, ವಿದ್ಯಾರ್ಥಿಗಳಿದ್ದು, ಹುದ್ದೆ ಮಂಜೂರಾಗದ ವಿಷಯಗಳಿಗೆ ಬೇಕಾಗುವ ಅತಿಥಿ ಉಪನ್ಯಾಸಕರ ಸಂಖ್ಯೆ | ಬಡ್ತಿ ಹಾಗೂ ಇನ್ನಿತರ ಕಾರಣಗಳಿಂದ ತೆರವಾಗುವ ಹುದ್ದೆಗಳಿಗೆ ಬೇಕಾಗುವ ಅತಿಥಿ ಉಪನ್ಯಾಸಕರ ಸಂಖ್ಯೆ | |
| 1 | 2 | 3 | 4 | 5 (3-4) | 6 | 7 | 8 | 9 (6+7+8) |
| 27 | RR-RAICHUR | 92 | 41 | 51 | 28 | 12 | 06 | 46 |
| 28 | SS-SOUTH CANARA | 196 | 48 | 148 | 49 | 04 | 08 | 61 |
| 29 | SU-UDUPI | 143 | 69 | 74 | 00 | 27 | 04 | 31 |
| 30 | TT-SHIMOGA | 95 | 65 | 30 | 25 | 08 | 07 | 40 |
| 31 | UU-TUMKUR | 250 | 72 | 178 | 63 | 36 | 01 | 100 |
| 32 | VV-KODAGU | 48 | 27 | 21 | 01 | 04 | 02 | 07 |
| | TOTAL | | | 2033 | 759 | 337 | 138 | 1234 |

ಜಂಟಿ ನಿರ್ದೇಶಕರು (ಆಡಳಿತ),
ಪದವಿ ಪೂರ್ವ ಶಿಕ್ಷಣ ಇಲಾಖೆ
ಬೆಂಗಳೂರು - 560 012